ಆ) ತುಮಕೂರು ಜಿಲ್ಲೆಯ ಹೆಬ್ಬೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಇರುವುದಿಲ್ಲ ಸದರಿ ಕಾಲೇಜಿಗೆ ಸ್ಥಳೀಯ ನೀರಾವರಿ ಇಲಾಖೆಯಿಂದ ನಿವೇಶನ ಪಡೆಯುವ ಬಗ್ಗೆ ಪ್ರಯತ್ನಗಳು ನಡೆಯುತ್ತಿದ್ದು, ನಿವೇಶನ ದೊರೆತ ತಕ್ಷಣ ಕ್ರಮ ಕೈಗೊಳ್ಳಲಾಗುವುದು

ಇ) (ಅ)ನಲ್ಲಿ ಉತ್ತರಿಸಿದಂತೆ

ಈ) ಕೆಲವೊಂದು ವಿಷಯಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ವಿಷಯಗಳಲ್ಲಿ ಪೂರ್ಣಕಾಲಿಕ ಉಪನ್ಯಾಸಕರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಉಪನ್ಯಾಸಕರ ಕೊರತೆ ಇರುವ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಉ) ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಒಟ್ಟು 24 ಹುದ್ದೆಗಳು ಖಾಲಿ ಇರುತ್ತವೆ

ಊ) ಇಲಾಖೆಯಲ್ಲಿ ವಿವಿಧ ವಿಷಯಗಳಲ್ಲಿ ಇಲಾಖೆಯಲ್ಲಿ ಖಾಲಿ ಇರುವ 610 ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕ ಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆ ಉಪನ್ಯಾಸಕರ ಆಯ್ಕೆಯ ನಂತರ ಸದರಿ ಕಾಲೇಜುಗಳಲ್ಲಿ ಕೊರತೆ ಇರುವ ಉಪನ್ಯಾಸಕರನ್ನು ತುಂಬಲಾಗುವುದು

501(367) ಶ್ರೀ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆಯಲ್ಲಿರುವ ವಸತಿ ಹೀನರ ಸಂಖ್ಯೆ ಎಷ್ಟು, (ಪಂಚಾಯತಿವಾರು ವಿವರ ನೀಡುವುದು)

ಆ) ವಸತಿ ಹೀನರಿಗೆ ವಸತಿ ನೀಡುವ ಬಗ್ಗೆ ಅನುಸರಿಸುತ್ತಿರುವ ಮಾನದಂಡಗಳೇನು,

ಇ) ಆಶ್ರಯ ಸಮಿತಿ ಶಾಸಕರ ನೇತೃತ್ವದಲ್ಲಿ ಇದುವರೆವಿಗೂ ನೇಮಕವಾಗಿಲ್ಲದಿರುವುದಕ್ಕೆ ಕಾರಣವೇನು, ಯಾವಾಗ ನೇಮಕ ಮಾಡಲಾಗುವುದು,

ಈ) ಆಶ್ರಯ ಯೋಜನೆಯಲ್ಲಿರುವ ಅನುದಾನವೆಷ್ಟು, ಇದರಲ್ಲಿ ಫಲಾನುಭವಿಗಳಿಗೆ ನೀಡಬೇಕಾಗಿರುವ ಹಣವೆಷ್ಟು?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) ಜೂನ್ 2003ರಲ್ಲಿ ಸ್ಥಳೀಯ ಸಂಸ್ಥೆಗಳ ಮೂಲಕ ವಸತಿ ರಹಿತರ ಮತ್ತು ನಿವೇಶನ ರಹಿತರ ಸಮೀಕ್ಷೆಯನ್ನು ಮಾಡಲಾಗಿದ್ದು, ಸಮೀಕ್ಷೆಯಂತೆ ತುಮಕೂರು ಜಿಲ್ಲೆಯಲ್ಲಿ 71345 ವಸತಿ ಹೀನರು ಹಾಗೂ 71966 ನಿವೇಶನ ರಹಿತರು ಇರುತ್ತಾರೆ

ಗ್ರಾಮ ಪಂಚಾಯತಿವಾರು ವಿವರ ಅನುಬಂಧ 'ಅ'ದಲ್ಲಿ ನೀಡಲಾಗಿದೆ

ಆ) ವಸತಿ ಹೀನರಿಗೆ ವಸತಿ ನೀಡಲು ಈ ಕೆಳಗೆ ಮಾನದಂಡಗಳು ಅನುಸರಿಸಲಾಗುತ್ತಿದೆ

1 ಗ್ರಾಮೀಣ ವಸತಿ ಯೋಜನೆಗಳಡಿಯಲ್ಲಿ ಫಲಾನುಭವಿ ಕರ್ನಾಟಕ ರಾಜ್ಯದ ಪ್ರಜೆಯಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರಬೇಕು ಮತ್ತು ಗ್ರಾಮ ಪಂಚಾಯತಿಯ ನಿವೇಶನ ರಹಿತ/ವಸತಿರಹಿತರ ಪಟ್ಟಿಯಲ್ಲಿ ಸೇರಿಸಬೇಕು ಹಾಗೂ ವಸತಿಗಾಗಿ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಅರ್ಜಿಗಳ ಮತ್ತು ಫಲಾನುಭವಿಗಳ ರಿಜಿಸ್ಟರ್‌ನಲ್ಲಿ ಸೇರ್ಪಡೆಯಾಗಿರಬೇಕು

2 ನಗರ ವಸತಿ ಯೋಜನೆಗಳಡಿಯಲ್ಲಿ ಫಲಾನುಭವಿ ಕರ್ನಾಟಕ ರಾಜ್ಯದ ಪ್ರಜೆಯಾಗಿದ್ದು, ನಗರ ಪ್ರದೇಶದಲ್ಲಿ ವಾಸವಾಗಿರಬೇಕು ಮತ್ತು ಸ್ಥಳೀಯ ಸಂಸ್ಥೆಗಳ ನಿವೇಶನರಹಿತ/ವಸತಿರಹಿತ ಪಟ್ಟಿಯಲ್ಲಿ ಸೇರಿರಬೇಕು ಹಾಗೂ ವಸತಿಗಾಗಿ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಅರ್ಜಿಗಳ ಮತ್ತು ಫಲಾನುಭವಿಗಳ ರಿಜಿಸ್ಟರ್‌ನಲ್ಲಿ ಸೇರ್ಪಡೆಯಾಗಿರಬೇಕು

3 ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಬಡತನ ರೇಖೆಗಿಂತ ಕೆಳಗಿರುವವರಿಗೆ ನಿಗದಿಪಡಿಸಿರುವ ಮಿತಿಗಿಂತ ಕಡಿಮೆ ಇರಬೇಕು

4 ಮನೆ/ನಿವೇಶನ ಹಕ್ಕು ಪತ್ರವನ್ನು ಮಹಿಳೆಯ ಹೆಸರಿನಲ್ಲೇ ವಿತರಿಸಬೇಕು ಒಂದು ವೇಳೆ ಅಂಗವಿಕಲರು, ಮಾಜಿ ಸೈನಿಕರು, ಏಕ ಮಹಿಳಾ ಒಡೆತನ, 60 ವರ್ಷಕ್ಕೂ ಮೇಲ್ಪಟ್ಟಿರುವ ನಾಗರೀಕರು ಮತ್ತು ವಿಧುರರು ಆಯ್ಕೆಯಾಗಿದ್ದಲ್ಲಿ ಅವರ ಹೆಸರಿನಲ್ಲಿ ಹಕ್ಕು ಪತ್ರ ವಿತರಿಸಬಹುದು

5 ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು

6 ನಿಯಮಾನುಸಾರ ಪರಿಶಿಷ್ಟ ಜಾತಿ/ಪಂಗಡದವರಿಗೆ ಮೀಸಲಾತಿ ಇರುತ್ತದೆ

ಇ) **ನಗರ ಪ್ರದೇಶ**

ನಗರ ಪ್ರದೇಶಗಳಲ್ಲಿ ಶಾಸಕರ ನೇತೃತ್ವದಲ್ಲಿ ಆಶ್ರಯ ಸಮಿತಿಗಳು ನೇಮಕವಾಗುತ್ತಿದ್ದು, ಇದುವರೆಗೆ ಒಟ್ಟು 77 ಕ್ಷೇತ್ರಗಳಲ್ಲಿ ಆಶ್ರಯ ಸಮಿತಿಗಳನ್ನು ರಚಿಸಲಾಗಿದೆ

ಗ್ರಾಮೀಣ ಪ್ರದೇಶ

ಕರ್ನಾಟಕ ಪಂಚಾಯತ್‌ರಾಜ್ ಕಾಯ್ದೆಗೆ ಸರ್ಕಾರವು ಅಧಿಸೂಚನೆ ಸಂಖ್ಯೆ SAMVYSHAE 33 SHASANA 2002, ದಿನಾಂಕ 22 9 2003ರಲ್ಲಿ ತಿದ್ದುಪಡಿಯನ್ನು ಮಾಡಿದ್ದು ಸದರಿ ತಿದ್ದುಪಡಿಯ ಪ್ರಕಾರ ವಸತಿ ಮತ್ತು ನಿವೇಶನ ಯೋಜನೆಗಳಲ್ಲಿ ಸರಕಾರವು ನೀಡುವ ಮನೆ, ನಿವೇಶನಗಳ ಗುರಿಗೆ ತಕ್ಕಂತೆ ಫಲಾನುಭವಿಗಳ ಆಯ್ಕೆಯನ್ನು ಗ್ರಾಮ ಸಭೆಗಳಲ್ಲಿ ಮಾಡುವ ಅಧಿಕಾರವು ಗ್ರಾಮ ಪಂಚಾಯತಿಗಳ ಕಾರ್ಯವ್ಯಾಪ್ತಿಗೆ ಬರುತ್ತದೆ

ಈ) ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ ಪ್ರತಿ ಮನೆಯ ಘಟಕ ಸಹಾಯವು ರೂ 20,000 ಆಗಿದ್ದು, ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ಸಂಪೂರ್ಣ ಸಹಾಯಧನ ನೀಡಲಾಗುತ್ತಿದ್ದು, ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ರೂ 10,000/- ಸಾಲ ಮತ್ತು 10,000/- ಸಹಾಯಧನ ನೀಡಲಾಗುತ್ತಿದೆ

ಗ್ರಾಮೀಣ ಪ್ರದೇಶಗಳಿಗೆ ಸಂಬಂಧಿಸಿದಂತೆ ಫಲಾನುಭವಿಗಳ ಮನೆಯ ಪ್ರಗತಿಯನ್ನು ಆಧರಿಸಿ 3 ಅಥವಾ 4 ಹಂತಗಳಲ್ಲಿ ಗ್ರಾಮ ಪಂಚಾಯತಿಗಳ ಮೂಲಕ ನೇರವಾಗಿ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗುತ್ತಿದೆ

ನಗರ ಆಶ್ರಯ ಯೋಜನೆಯಡಿಯಲ್ಲಿ ಪ್ರತಿ ಮನೆಯ ಘಟಕ ಸಹಾಯ ರೂ 25,000/- ಆಗಿದ್ದು, ಎಲ್ಲಾ ವರ್ಗದ ಫಲಾನುಭವಿಗಳಿಗೆ ಸಂಪೂರ್ಣ ಸಾಲವಾಗಿರುತ್ತದೆ

ನಗರ ಪ್ರದೇಶಗಳಿಗೆ ಸಂಬಂಧಿಸಿದಂತೆ ನಿಗಮದಿಂದ ನೇರವಾಗಿ ಸ್ಥಳೀಯ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಲಾಗಿದ್ದು, ಸ್ಥಳೀಯ ಸಂಸ್ಥೆಗಳಿಂದ ನೇರವಾಗಿ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗುವುದು